# ನಾಲ್ಕನೇ ಬಾರಿಗೆ ಪುಟ್ಟಣ್ಣ ಜಯಭೇರಿ

ಪ್ರಜಾವಾಣಿ ವಾರ್ತೆ 11-11-20



ಪುಟ್ಟಣ್ಣ

ಬೆಂಗಳೂರು: ವಿಧಾನ ಪರಿಷತ್ತಿಗೆ ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ನಡೆದ ಚುನಾವಣೆಯಲ್ಲಿ ಬಿಜೆಪಿಯ ಅಭ್ಯರ್ಥಿ ಪುಟ್ಟಣ್ಣ ಗೆಲುವು ಕಂಡಿದ್ದಾರೆ.

ಈ ಹಿಂದೆ ಇದೇ ಕ್ಷೇತ್ರದಿಂದ ಅವರು ಮೂರು ಬಾರಿ ಜೆಡಿಎಸ್‌ನಿಂದ ಆಯ್ಕೆಯಾಗಿದ್ದರು. ಆದರೆ, ಈ ಬಾರಿ ಪಕ್ಷಾಂತರಗೊಂಡು ಬಿಜೆಪಿಯಿಂದ ಕಣಕ್ಕಿಳಿದಿದ್ದು, ನಾಲ್ಕನೇ ಬಾರಿ ಜಯಭೇರಿ ಬಾರಿಸಿದ್ದಾರೆ.

ಕ್ಷೇತ್ರದಲ್ಲಿ ಚಲಾವಣೆಯಾದ 13,287 ಕ್ರಮಬದ್ಧ ಮತಗಳಲ್ಲಿ ಪುಟ್ಟಣ ಅವರು ಮೊದಲ ಪ್ರಾಶಸ್ತ್ಯದ ಮತ ಎಣಿಕೆಯಲ್ಲೇ 7,445 ಮತಗಳನ್ನು ಪಡೆದಿದ್ದಾರೆ.

ಮೊದಲ ಪ್ರಾಶಸ್ತ್ಯದ ಮತ ಎಣಿಕೆಯಲ್ಲಿ ಒಟ್ಟು ಕ್ರಮಬದ್ಧ ಮತಗಳಲ್ಲಿ ಶೇ 50ಕ್ಕಿಂತ ಒಂದು ಮತ ಹೆಚ್ಚು ಪಡೆಯಬೇಕು. ಈ ಕ್ಷೇತ್ರದಲ್ಲಿ ಗೆಲ್ಲಲು ಪ್ರಥಮ ಪ್ರಾಶಸ್ತ್ಯದಲ್ಲಿ 6,644 ಮತಗಳನ್ನು ಪಡೆಯಬೇಕಿತ್ತು.

ಕಾಂಗ್ರೆಸ್‌ನ ಪ್ರವೀಣ್ ಪೀಟರ್ 782 ಮತಗಳನ್ನು ಪಡೆದರೆ, ಜೆಡಿಎಸ್‌ನ ಎ.ಪಿ. ರಂಗನಾಥ್ 5,107 ಮತಗಳನ್ನು ಪಡೆದಿದ್ದಾರೆ. 1,251 ಮತ ಮತಗಳು ತಿರಸ್ಕೃತಗೊಂಡಿವೆ.

ಆಗ್ನೇಯ ಪದವೀಧರ ಕ್ಷೇತ್ರದ ಮತ ಎಣಿಕೆ ಮಂಗಳವಾರ ಸಂಜೆ ಆರಂಭಗೊಂಡಿದ್ದು, ಎಣಿಕೆ ಮುಂದುವರಿದಿದೆ.



ಧಾರವಾಡದ ಕೃಷಿ ವಿಶ್ವವಿದ್ಯಾಲಯದಲ್ಲಿ ಮಂಗಳವಾರ ಮತ ಎಣಿಕೆ ನಂತರ ಎಸ್.ವಿ. ಸಂಕನೂರ ಅವರ ಗೆಲುವಿಗೆ ಬಿಜೆಪಿ ಕಾರ್ಯಕರ್ತರು ಸಂಭ್ರಮಿಸಿದರು

# ಪಶ್ಚಿಮ ಪದವೀಧರ ಕ್ಷೇತ್ರ ಸಂಕನೂರ ಪುನರಾಯ್ಕೆ



ಸಂಕನೂರ

ಧಾರವಾಡ: ವಿಧಾನ ಪರಿಷತ್ ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿತ ಎಸ್.ವಿ. ಸಂಕನೂರ ಅವರು 23,857 ಮೊದಲ ಪ್ರಾಶಸ್ತ್ಯದ ಮತ ಪಡೆಯುವ ಮೂಲಕ ಪುನರಾಯ್ಕೆಯಾದರು.

ಪ್ರತಿಸ್ಪರ್ಧಿ ಕಾಂಗ್ರೆಸ್‌ನ ಆರ್.ಎಂ.ಕುಬೇರಪ್ಪ 12,448 ಮತ ಪಡೆದರು. ಜೆಡಿಎಸ್ ಹಾಗೂ ಇತರ ಸಂಘಟನೆಗಳ ಬೆಂಬಲ ಪಡೆದಿದ್ದ ಪಕ್ಷೇತರ ಅಭ್ಯರ್ಥಿ ಬಸವರಾಜ ಗುರಿಕಾರ ಅವರಿಗೆ 6,188 ಮತ ಪಡೆಯಲು ಮಾತ್ರ ಸಾಧ್ಯವಾಯಿತು. 8,772 ಮತಗಳು ತಿರಸ್ಕೃತಗೊಂಡವು. ಸಂಕನೂರ ಮೊದಲ ಸುತ್ತಿನಿಂದಲೇ ಮುನ್ನಡೆ ಕಾಯ್ದುಕೊಂಡರು. ಸಂಜೆ ಚುನಾವಣಾಧಿಕಾರಿ ಅಮ್ಲಾನ್ ಆದಿತ್ಯ ಬಿಸ್ವಾಸ್ ಸಂಕನೂರ ಅವರ ಗೆಲುವನ್ನು ಘೋಷಿಸಿದರು. 11 ಅಭ್ಯರ್ಥಿಗಳು ಕಣದಲ್ಲಿದ್ದರು. ಒಟ್ಟು 52,068 ಮತಗಳು ಚಲಾವಣೆಯಾಗಿದ್ದವು.

ಮೊದಲ ಪ್ರಾಶಸ್ತ್ಯದ ಮತ ಎಣಿಕೆ ಆರಂಭಿಸಲಾಗಿದೆ. ಮತ ಎಣಿಕೆ ಬುಧವಾರ ಮಧ್ಯಾಹ್ನದವರೆಗೆ ಮುಂದುವರಿಯಬಹುದು ಎಂದು ಚುನಾವಣಾ ಅಧಿಕಾರಿಗಳು ತಿಳಿಸಿದ್ದಾರೆ.